ಅಧ್ಯಕ್ಷರು: ಪ್ರಸ್ತಾವ ಏನೆಂದರೆ ''1997ನೇ ಸಾಲಿನ ಕರ್ನಾಟಕ ಪಂಚಾಯತ್‌ರಾಜ್ (3ನೇ ತಿದ್ದುಪಡಿ) ವಿಧೇಯಕವನ್ನು, ತಿದ್ದುಪಡಿಯಾದರೀತಿಯಲ್ಲಿ ಅಂಗೀಕರಿಸುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು. ಮತ್ತು ವಿಧೇಯಕಕ್ಕೆ ಅನುಮೋದನೆ ನೀಡಲಾಯಿತು.

(8) ಪ್ರಕಟಣೆಗಳು:

ಅಧ್ಯಕ್ಷರು: (i) ವಿಧಾನ ಪರಿಷತ್ತಿನ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿರುತ್ತದೆ. ಕರ್ನಾಟಕ ವಿಧಾನಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 118ರ ಮೇರೆಗೆ ವಿಧಾನಪರಿಷತ್ತು ದಿನಾಂಕ 11ನೇ ಸೆಪ್ಟೆಂಬರ್ 1997ರಂದು ಈ ಕೆಳಕಂಡ ವಿಧೇಯಕಗಳಿಗೆ ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಿತೆಂದು ಈ ಮೂಲಕ ತಿಳಿಸುತ್ತಿದ್ದೇನೆ.

1) ಕೂಡಲಸಂಗಮ ಅಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕ 1996

2) ಕರ್ನಾಟಕ ಸ್ವಾಂವ್ (ಎರಡನೇ ತಿದ್ದುಪಡಿ) ವಿಧೇಯಕ 1997

3) ಮಾನವ ನೇತ್ರಗಳ ಚಿಕಿತ್ಸೆ ಮತ್ತು ಸಂಶೋಧನಾ ಉದ್ದೇಶಗಳಿಗೆ ಬಳಸಿಕೊಳ್ಳುವುದಕ್ಕೆ ಅಧಿಕಾರ ನೀಡುವುದು ಮತ್ತು ಇತರ ಕಾನೂನುಗಳ ನಿರಸನ ಕರ್ನಾಟಕ ವಿಧೇಯಕ 1996

(ii) ಕರ್ನಾಟಕ ವಿಧಾನಪರಿಷತ್ತಿನ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿರುತ್ತದೆ. ಕರ್ನಾಟಕ ವಿಧಾನಪರಿಷತ್ತಿನ ಕಾರ್ಯವಿಧಾನ ಮತ್ತು ನಡವಳಿಕೆ ನಿಯಮ 120ರ ಮೇರೆಗೆ ವಿಧಾನಪರಿಷತ್ತು 11ನೇ ಸೆಪ್ಟೆಂಬರ್ 1997ರಂದು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ 1997ನ್ನು ತಿರಸ್ಕರಿಸಲಾಯಿತೆಂದು ಈ ಮೂಲಕ ತಿಳಿಸುತ್ತಿದ್ದೇನೆ.

ಅಧ್ಯಕ್ಷರು: ಈಗ ಸದನವನ್ನು ಮುಂದೂಡಲಾಗಿದೆ. ಪುನಃ ನಾಳೆ ಬೆಳಗ್ಗೆ 10 ಗಂಟೆಗೆ ಸಭೆ ಸಮಾವೇಶಗೊಳ್ಳುತ್ತದೆ.

(ರಾತ್ರಿ 8 ಗಂಟೆ 05 ನಿಮಿಷಕ್ಕೆ ಸದನವು ಮುಂದೂಡಲ್ಪಟ್ಟು 12-9-1997ರಂದು ಬೆಳಗ್ಗೆ 10 ಗಂಟೆಗೆ ಸಮಾವೇಶಗೊಳ್ಳಲು ನಿರ್ಧರಿಸಿತು)

(+ ಈ ಚಿಹ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣಗಳನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ)